**Akashvani : Bangalore**
**National Bulletin In Kannada**
**04.09.2024 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**04.09.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಪ್ರಧಾನಿ ನರೇಂದ್ರ ಮೋದಿ ಬ್ರೂನೈ ಪ್ರವಾಸ; ಇಂದು ಸುಲ್ತಾನ್ ಹಾಜಿ ಹಸನಲ್ ಬೋಲ್ಕಿಯಾ ಅವರೊಂದಿಗೆ ಮಾತುಕತೆ

೨. ರಾಷ್ಟ್ರಪತಿ ದ್ರೌಪದಿ ಮುರ್ಮು ಮಹಾರಾಷ್ಟ್ರ ಭೇಟಿ; ಇಂದು ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ

೩. ಬಾಹ್ಯಾ ಸವಾಲಿನ ಪರಿಸ್ಥಿತಿಗಳ ನಡುವೆಯೂ ಭಾರತದ ಆರ್ಥಿಕತೆಯ ಸಕಾರಾತ್ಮಕ ಬೆಳವಣಿಗೆ - ವಿಶ್ವ ಬ್ಯಾಂಕ್ ಹೇಳಿಕೆ

೪. ಪ್ಯಾರಿಸ್ ಪ್ಯಾರಾಲಿಂಪಿಕ್ಸ್; ನಿನ್ನೆಯ ಸ್ಪರ್ಧೆಗಳಲ್ಲಿ ಐದು ಪದಕ ಗೆದ್ದ ಭಾರತೀಯ ಕ್ರೀಡಾಪಟುಗಳು

**<><*<><>*><>**

ಬ್ರೂನೈ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ, ಇಂದು ಆ ದೇಶದ ಸುಲ್ತಾನ್ ಹಾಜಿ ಹಸನಲ್ ಬೊಲ್ಕಿಯಾ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಉಭಯ ದೇಶಗಳ ನಡುವಿನ ಎಲ್ಲ ಆಯಾಮಗಳ ದ್ವಿಪಕ್ಷೀಯ ಸಂಬಂಧಗಳು ಹಾಗೂ ಹೊಸ ಕ್ಷೇತ್ರಗಳಲ್ಲಿ ಸರ್ಕಾರ ವಿಸ್ತರಣೆ ಕುರಿತು ಚರ್ಚೆ ನಡೆಸುವ ಸಾಧ್ಯತೆಯಿದೆ. ಇದೇ ವೇಳೆ ಹಲವು ಒಪ್ಪಂದಗಳಿಗೆ ಅಂಕಿತ ಹಾಕುವ ನಿರೀಕ್ಷೆಯಿದೆ.  ಬ್ರೂನೈ ಮತ್ತು ಸಿಂಗಾಪುರ್ ಈ ಎರಡು ರಾಷ್ಟ್ರಗಳಿಗೆ ಪ್ರವಾಸ ಕೈಗೊಂಡಿರುವ ಪ್ರಧಾನಿ ನರೇಂದ್ರ ಮೋದಿ, ಮೊದಲ ಚರಣದಲ್ಲಿ ನಿನ್ನೆ ಸಲಾಮ್‌ನ ವಿಮಾನ ನಿಲ್ದಾಣಕ್ಕೆ ಬಂದಿಳಿದರು. ಪ್ರಧಾನಿ ಅವರನ್ನು ಅಲ್ಲಿನ ರಾಜಕುಮಾರ ಹಾಜಿ ಅಲ್ ಮುಹ್ತಾದಿ ಬಿಲ್ಲಾಹ್ ಸ್ವಾಗತಿಸಿದರು. ಇದೇ ವೇಳೆ ಪ್ರಧಾನಿ ಅವರಿಗೆ ಬ್ರೂನೈನಲ್ಲಿರುವ ಭಾರತೀಯ ಸಮುದಾಯದವರು ಆತ್ಮೀಯ ಸ್ವಾಗತ ಕೋರಿದರು. ದರುಸ್ಸಲಾಮ್‌ಗೆ ಪ್ರಯಾಣ ಬೆಳೆಸುವ ಮುನ್ನ ಪ್ರಧಾನಮಂತ್ರಿ ನರೇಂದ್ರ ಮೋದಿ ಮಾತನಾಡಿ, ಮೊದಲ ಬಾರಿಗೆ ದ್ವಿಪಕ್ಷೀಯ ಪ್ರವಾಸ ಕೈಗೊಳ್ಳಲಾಗಿದೆ. ಭಾರತ ಮತ್ತು ಬ್ರೂನೈ ೪೦ ವರ್ಷಗಳ ರಾಜತಾಂತ್ರಿಕ ಸಂಬಂಧ ಆಚರಿಸುತ್ತಿರುವ ಸಂದರ್ಭದಲ್ಲಿ, ಸುಲ್ತಾನ್ ಹಾಜಿ ಹಸನಲ್ ಬೊಲ್ಕಿಯಾ ಮತ್ತು ರಾಜಮನೆತನದ ಇತರೆ ಸದಸ್ಯರ ಭೇಟಿಗಳನ್ನು ಎದುರು ನೋಡುತ್ತಿದ್ದೇನೆ ಎಂದು ಹೇಳಿದರು.  ಪ್ರಧಾನಿ ಅವರು, ಬಂದರ್ ಸೇರಿ ಬೆಗವಾನ್‌ನಲ್ಲಿ ಭಾರತೀಯ ರಾಯಭಾರಿಯ ನೂತನ ಕಚೇರಿಯನ್ನು ಉದ್ಘಾಟಿಸಿದರು. ಅಲ್ಲದೆ, ಬ್ರೂನೈನಲ್ಲಿರುವ ಹೋಮರ್ ಅಲಿ ಸೈಫುದ್ದೀನ್ ಮಸೀದಿಗೂ ಭೇಟಿ ನೀಡಿದರು. ಬ್ರೂನೈ ನಂತರ ಪ್ರಧಾನಿ ನರೇಂದ್ರ ಮೋದಿ ಅವರು, ಸಿಂಗಾಪುರಕ್ಕೆ ಭೇಟಿ ನೀಡಲಿದ್ದು, ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ, ಪ್ರಧಾನಿ ಲಾರೆನ್ಸ್ ವಾಂಗ್, ಹಿರಿಯ ಸಚಿವರಾದ ಲೀ ಸೀನ್ ಲೂಂಗ್ ಮತ್ತು ಗೋ ಚೋಕ್ ಟಾಂಗ್ ಅವರನ್ನು ಭೇಟಿ ಮಾಡುವ ಅವಕಾಶಕ್ಕಾಗಿ ಎದುರು ನೋಡುತ್ತಿದ್ದೇನೆ ಎಂದು ಅವರು ಹೇಳಿದರು. ತಮ್ಮ ಪ್ರವಾಸದ ವೇಳೆ ನರೇಂದ್ರ ಮೋದಿ ಅವರು ಸಿಂಗಾಪುರದ ಉದ್ಯಮಿಗಳನ್ನು ಭೇಟಿಯಾಗಲಿದ್ದಾರೆ. ಸಿಂಗಾಪುರದೊಂದಿಗಿನ ಕಾರ್ಯತಂತ್ರದ ಸಹಭಾಗಿತ್ವವನ್ನು ವಿಶೇಷವಾಗಿ ಸುಧಾರಿತ ಉತ್ಪಾದನೆ, ಡಿಜಿಟಲೀಕರಣ ಮತ್ತು ಸುಸ್ಥಿರ ಅಭಿವೃದ್ಧಿಯ ಹೊಸ ಮತ್ತು ಉದಯೋನ್ಮುಖ ಕ್ಷೇತ್ರಗಳಲ್ಲಿ ಆಳವಾಗಿಸಲು ಚರ್ಚಿಸಲು ಎದುರು ನೋಡುತ್ತಿದ್ದೇನೆ ಎಂದು ಪ್ರಧಾನಿ ಹೇಳಿದ್ದಾರೆ.

**<><*<><>*><>**

ಮಹಾರಾಷ್ಟ್ರ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಲಾತೂರ್ ಜಿಲ್ಲೆಯ ಉದ್ಗೀರ್‌ನಲ್ಲಿಂದು ವಿಶ್ವಶಾಂತಿ ಬುದ್ಧ ವಿಹಾರವನ್ನು ಉದ್ಘಾಟಿಸಲಿದ್ದಾರೆ. ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್, ಮುಖ್ಯಮಂತ್ರಿ ಏಕನಾಥ್ ಶಿಂಧೆ, ಕೇಂದ್ರ ಸಚಿವ ರಾಮದಾಸ ಅಠಾವಳೆ ಹಾಗೂ ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವಿಸ್ ಮತ್ತು ಅಜಿತ್ ಪವಾರ್ ಈ ಸಂದರ್ಭದಲ್ಲಿ ಉಪಸ್ಥಿತರಿರುವರು. ರಾಷ್ಟ್ರಪತಿ ಅವರು, ಉದಯಗಿರಿ ಕಾಲೇಜು ಮೈದಾನದಲ್ಲಿ ಶಾಸನ್ ಅಪ್ಲ್ಯಾ ದರಿ” ಮತ್ತು ಮುಖ್ಯಮಂತ್ರಿ ಮಾಝಿ ಲಡ್ಕಿ ಬಹಿನಾ ಯೋಜನೆ”ಯ ಫಲಾನುಭವಿಗಳನ್ನೂ ಭೇಟಿಯಾಗಲಿದ್ದಾರೆ. ನಾಂದೇಡ್‌ನಲ್ಲಿರುವ ತಖ್ತ್ ಸಚಖಂಡ್ ಶ್ರೀ ಹುಜೂರ್ ಸಾಹಿಬ್ ಗುರುದ್ವಾರಕ್ಕೂ ದ್ರೌಪದಿ ಮುರ್ಮು ಅವರು ಭೇಟಿ ನೀಡಲಿದ್ದಾರೆ. ಮಹಾರಾಷ್ಟ್ರಕ್ಕೆ ಕಳೆದ ಸೋಮವಾರದಂದು ಮೂರು ದಿನಗಳ ಪ್ರವಾಸ ಕೈಗೊಂಡಿದ್ದ ರಾಷ್ಟ್ರಪತಿ ಅವರು ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು.

**<><*<><>*><>**

ದೇಶದ ರಕ್ಷಣಾ ಸನ್ನದ್ಧತೆಯನ್ನು ಹೆಚ್ಚಿಸಲು ಒಂದು ಲಕ್ಷ ೪೫ ಸಾವಿರ ಕೋಟಿ ರೂಪಾಯಿಗಳ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ.  ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ರಕ್ಷಣಾ ಸ್ವಾಧೀನ ಮಂಡಳಿ-ಡಿಎಸಿ, ೧೦ ಬಂಡವಾಳ ಸ್ವಾಧೀನ ಪ್ರಸ್ತಾವನೆಗಳನ್ನು ಅನುಮೋದಿಸಿತು.  ಭವಿಷ್ಯದ ಸಿದ್ಧ ಯುದ್ಧ ವಾಹನಗಳು, ಏರ್ ಡಿಫೆನ್ಸ್ ಫೈರ್ ಕಂಟ್ರೋಲ್ ರಾಡಾರ್‌ಗಳು, ಡಾರ್ನಿಯರ್-೨೨೮ ವಿಮಾನಗಳು, ಮುಂದಿನ ಪೀಳಿಗೆಯ ವೇಗದ ಗಸ್ತು ಮತ್ತು ಕಡಲಾಚೆಯ ಗಸ್ತು ಹಡಗುಗಳ ಖರೀದಿಗೆ ಡಿಎಸಿ ಒಪ್ಪಿಗೆ ನೀಡಿತು.  ಭವಿಷ್ಯದ ಸಿದ್ಧ ಯುದ್ಧ ವಾಹನಗಳು ವಿವಿಧ ಭೂಪ್ರದೇಶಗಳಲ್ಲಿ ಉದ್ಭವಿಸುವ ಬೆದರಿಕೆಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಭಾರತೀಯ ಸೇನೆಯ ಟ್ಯಾಂಕ್‌ಗಳನ್ನು ಆಧುನೀಕರಿಸುತ್ತವೆ. ಮುಂದಿನ ೩೫ ರಿಂದ ೪೫ ವರ್ಷಗಳವರೆಗೆ ಕಾರ್ಯಾಚರಣೆಯ ಸಾಮರ್ಥ್ಯಗಳು ಮತ್ತು ಯಾಂತ್ರೀಕರಣದೊಂದಿಗೆ ಸೇವೆಯಲ್ಲಿರುವಂತೆ ಇದನ್ನು ವಿನ್ಯಾಸಗೊಳಿಸಲಾಗಿದೆ.  ಏರ್ ಡಿಫೆನ್ಸ್ ಫೈರ್ ಕಂಟ್ರೋಲ್ ರಾಡಾರ್‌ಗಳು ವೈಮಾನಿಕ ಗುರಿಗಳನ್ನು ಪತ್ತೆಹಚ್ಚಲು ಮತ್ತು ಅವುಗಳನ್ನು ಧ್ವಂಸಗೊಳಿಸಲು ಸಹಕಾರಿಯಾಗಿದೆ. ಡಾರ್ನಿಯರ್-೨೨೮ ವಿಮಾನಗಳು, ಮುಂದಿನ ಪೀಳಿಗೆಯ ವೇಗದ ಗಸ್ತು ಹಡಗುಗಳು ಹಾಗೂ ಮುಂದಿನ ಪೀಳಿಗೆಯ ಕಡಲಾಚೆಯ ಗಸ್ತು ನೌಕೆಗಳ ಖರೀದಿಯು, ಕಣ್ಗಾವಲು, ಗಸ್ತು ತಿರುಗುವಿಕೆ, ಶೋಧನೆ, ಪಾರುಗಾಣಿಕಾ ಮತ್ತು ವಿಪತ್ತು ಪರಿಹಾರ ಕಾರ್ಯಾಚರಣೆಗಳನ್ನು ಕೈಗೊಳ್ಳಲು ಭಾರತೀಯ ಕಾವಲು ಪಡೆಯ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

**<><*<><>*><>**

ಬಾಹ್ಯ ಸವಾಲಿನ ಪರಿಸ್ಥಿತಿಗಳ ನಡುವೆಯೂ ಭಾರತದ ಮಧ್ಯಮ-ಅವಧಿಯ ದೃಷ್ಟಿಕೋನವು ಸಕಾರಾತ್ಮಕವಾಗಿಯೇ ಉಳಿಯುವ ನಿರೀಕ್ಷೆಯಿದೆ ಎಂದು ವಿಶ್ವ ಬ್ಯಾಂಕ್ ಹೇಳಿದೆ. ವಿಶ್ವ ಬ್ಯಾಂಕ್‌ನ ಇತ್ತೀಚಿನ ಭಾರತದ ಅಭಿವೃದ್ಧಿ ನವೀಕರಣದ ಪ್ರಕಾರ, ಬದಲಾಗುತ್ತಿರುವ ಜಾಗತಿಕ ಸನ್ನಿವೇಶದಲ್ಲಿ ಭಾರತದ ವ್ಯಾಪಾರದ ಅವಕಾಶಗಳು”, ೨೦೨೪-೨೫ರ ಆರ್ಥಿಕ ವರ್ಷದಲ್ಲಿ ಬೆಳವಣಿಗೆ ಶೇಕಡಾ ೭ಕ್ಕೆ ಬೆಳವಣಿಗೆ ತಲುಪುವ ಮುನ್ಸೂಚನೆ ಇದೆ. ಇದು ೨೦೨೫-೨೬ ಮತ್ತು ೨೦೨೬-೨೭ರಲ್ಲಿಯೂ ಉಳಿಯಲಿದೆ ಎಂದು ತಿಳಿಸಿದೆ. ದೃಢವಾದ ಆದಾಯದ ಬೆಳವಣಿಗೆ ಹಾಗೂ ಹಣಕಾಸಿನ ಮತ್ತಷ್ಟು ಬಲವರ್ಧನೆಯೊಂದಿಗೆ, ಸಾಲ-ಜಿಡಿಪಿ ಅನುಪಾತವು ೨೦೨೩-೨೪ ಹಣಕಾಸು ವರ್ಷದಲ್ಲಿ ಶೇಕಡಾ ೮೩.೯ರಿಂದ ೨೦೨೬-೨೭ರ ವೇಳೆಗೆ ಶೇಕಡಾ ೮೨ಕ್ಕೆ  ಕುಸಿಯುವ ನಿರೀಕ್ಷೆಯಿದೆ ಎಂದು ಅಂದಾಜಿಸಲಾಗಿದೆ. ಚಾಲ್ತಿ ಖಾತೆ ಕೊರತೆಯು ೨೦೨೬-೨೭ರ ಹಣಕಾಸು ವರ್ಷದವರೆಗೆ ಜಿಡಿಪಿಯ ಸುಮಾರು ೧ ರಿಂದ ೧.೬ರ ಪ್ರತಿಶತದಷ್ಟು ಇರುತ್ತದೆ ಎಂದು ನಿರೀಕ್ಷಿಸಲಾಗಿದ್ದು, ಭಾರತವು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಉಳಿದಿದೆ. ಅಲ್ಲದೆ, ೨೦೨೩-೨೦೨೪ ರ ಹಣಕಾಸು ವರ್ಷದಲ್ಲಿ ಶೇಕಡಾ ೮.೨ರಷ್ಟು ಕ್ಷಿಪ್ರವಾಗಿ ಬೆಳೆಯುತ್ತಿದೆ ಎಂಬುದನ್ನು ಭಾರತದ ಅಭಿವೃದ್ಧಿ ನವೀಕರಣದ ವರದಿಯಲ್ಲಿ ತಿಳಿಸಲಾಗಿದೆ. ಸಾರ್ವಜನಿಕ ಮೂಲಸೌಕರ್ಯ ಹೂಡಿಕೆ ಮತ್ತು ರಿಯಲ್ ಎಸ್ಟೇಟ್‌ನಲ್ಲಿನ ಗೃಹ ಹೂಡಿಕೆಯಲ್ಲಿನ ಏರಿಕೆಯಿಂದ ಬೆಳವಣಿಗೆ ಹೆಚ್ಚಿಸಲಾಗಿದೆ. ರಾಷ್ಟ್ರೀಯ ಸಾರಿಗೆ ನೀತಿ ಮತ್ತು ವ್ಯಾಪಾರ ವೆಚ್ಚ ಕಡಿಮೆ ಮಾಡುವ ಡಿಜಿಟಲ್ ಉಪಕ್ರಮಗಳ ಮೂಲಕ ಭಾರತ ತನ್ನ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಿದೆ ಎಂದು ವರದಿ ಒತ್ತಿಹೇಳಿದೆ.

**<><*<><>*><>**

ಪ್ರಧಾನಮಂತ್ರಿ ಆವಾಸ್ ಯೋಜನೆ- ಪಿಎಂಎವೈ ಪ್ರಯೋಜನಗಳನ್ನು ಅಸಂಘಟಿತ ಕಾರ್ಮಿಕರಿಗೆ ವಿಸ್ತರಿಸುವ ಕ್ರಮವನ್ನು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಪ್ರಾರಂಭಿಸಿದೆ. ವಲಸೆ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಬೀಡಿ ಕಾರ್ಮಿಕರು, ಸಿನಿ ಕಾರ್ಮಿಕರು, ಕಲ್ಲಿದ್ದಲು ಕಾರ್ಮಿಕರು, ಗುತ್ತಿಗೆ ಕಾರ್ಮಿಕರು ಮತ್ತು ಇತರೆ ಅಸಂಘಟಿತ ಕಾರ್ಮಿಕರನ್ನು ಸೇರ್ಪಡೆಗೊಳಿಸುವಂತೆ ಒತ್ತಾಯಿಸಿ, ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು ಎಲ್ಲಾ ರಾಜ್ಯ ಸರ್ಕಾರಗಳಿಗೆ ಪತ್ರ ಬರೆದಿದೆ. ಅರ್ಹ ಫಲಾನುಭವಿಗಳಿಗೆ ಎರಡು ಕೋಟಿ ಹೆಚ್ಚುವರಿ ಮನೆಗಳನ್ನು ಒದಗಿಸುವ ಗುರಿಯೊಂದಿಗೆ ಪ್ರಸಕ್ತ ಹಣಕಾಸು ವರ್ಷದಿಂದ ೨೦೨೮-೨೯ ರವರೆಗೆ ಹೆಚ್ಚುವರಿ ಐದು ವರ್ಷಗಳವರೆಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆ ವಿಸ್ತರಿಸಲು ಕೇಂದ್ರ ಸಚಿವ ಸಂಪುಟದ ಅನುಮೋದನೆ ಪರಿಗಣಿಸಿ, ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಉಪಕ್ರಮವು ಆರ್ಥಿಕವಾಗಿ ದುರ್ಬಲ ಕಾರ್ಮಿಕರ ವಸತಿ ಅಗತ್ಯಗಳನ್ನು ಪೂರೈಸುತ್ತದೆ.

<><*<><>*><>

ಇದೇ ೧೯ ರಿಂದ ೨೨ ರವರೆಗೆ ವಿಶ್ವ ಆಹಾರ ಮೇಳ ಆಯೋಜನೆಗೊಂಡಿರುವ ಹಿನ್ನೆಲೆಯಲ್ಲಿ ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ನವದೆಹಲಿಯಲ್ಲಿ ನಿನ್ನೆ ಭಾರತ ಮಂಟಪಮ್‌ನಲ್ಲಿ ಮೇಳದ ಸಿದ್ಧತೆ ಪರಿಶೀಲಿಸಿದರು. ಪ್ರದರ್ಶನ ನಡೆಯುವ ಸ್ಥಳ, ಸಮ್ಮೇಳನ ಸಭಾಂಗಣ ಹಾಗೂ ಇನ್ನಿತರ ಮೂಲ ಸೌಕರ್ಯಗಳನ್ನು ಪರಿಶೀಲಿಸಿದರು. ಇದೇ ವೇಳೆ ಆಯೋಜಕರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಉನ್ನತ ಮಟ್ಟದಲ್ಲಿ ನಡೆಸುವಂತೆ ಸೂಚಿಸಿದರು. ವಿಶ್ವ ಆಹಾರ ಮೇಳ, ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವಾಲಯದ ಪ್ರಮುಖ ಕಾರ್ಯಕ್ರಮವಾಗಿದ್ದು ಆಹಾರ ಸಂಸ್ಕರಣೆಯಲ್ಲಿ ಜಾಗತಿಕವಾಗಿ ನೂತನ ತಂತ್ರಜ್ಞಾನ ಹಾಗೂ ನಾವೀನ್ಯತೆ ಕಂಡುಕೊಳ್ಳಲು ಉತ್ತಮ ಅವಕಾಶ ಲಭ್ಯವಾಗಲಿದೆ. ಭವಿಷ್ಯದಲ್ಲಿ ಆಹಾರ ಸಂಸ್ಕರಣೆ ವಿಧಾನದಲ್ಲಿ ತನ್ನ ವ್ಯಾಪ್ತಿ ವಿಸ್ತರಿಸಿಕೊಳ್ಳಲು ಬೇಕಾದ ಸಹಕಾರ, ಸಂಪರ್ಕ ಜಾಲ ಕುರಿತಂತೆ ಸರಣಿ ಚರ್ಚೆಗಳು ಈ ಮೇಳದಲ್ಲಿ ನಡೆಯಲಿವೆ.

<><*<><>*><>

ತ್ರಿಪುರಾ ಸರ್ಕಾರ, ರಾಷ್ಟ್ರೀಯ ವಿಮೋಚನಾ ಪಡೆ ಮತ್ತು ಆಲ್ ತ್ರಿಪುರಾ ಟೈಗರ್ ಫೋರ್ಸ್‌ನ ಪ್ರತಿನಿಧಿಗಳು ಹಾಗೂ ಕೇಂದ್ರ ಸರ್ಕಾರದ ನಡುವೆ ನವದೆಹಲಿಯಲ್ಲಿಂದು ಜ್ಞಾಪಕ ಒಪ್ಪಂದ ಪತ್ರಕ್ಕೆ ಅಂಕಿತ ಬೀಳಲಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮ್ಮುಖದಲ್ಲಿ ಈ ಒಪ್ಪಂದಕ್ಕೆ ಸಹಿ ಹಾಕಲಾಗುತ್ತದೆ. ತ್ರಿಪುರಾ ಮುಖ್ಯಮಂತ್ರಿ ಮಾಣಿಕ್ ಸಹಾ ಹಾಗೂ ಗೃಹ ಸಚಿವಾಲಯದ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿರಲಿದ್ದಾರೆ.

<><*<><>*><>

ಭಾರತೀಯ ವಾಯುಪಡೆಯ ಸುಕೊಯ್-೩೦ ಎಂಕೆಐ ವಿಮಾನಕ್ಕಾಗಿ ೨೪೦ ಏರೋ-ಎಂಜಿನ್‌ಗಳ ಖರೀದಿಯ ಪ್ರಸ್ತಾವನೆಗೆ ಭದ್ರತಾ ಕುರಿತು ಸಂಪುಟ ಸಮಿತಿಯು ಅನುಮೋದಿಸಿದೆ. ಒಟ್ಟು ೨೬ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನಿಂದ ಖರೀದಿಗೆ ಅನುಮೋದನೆಯನ್ನು ನೀಡಲಾಗಿದೆ. ಈ ಏರೋ-ಎಂಜಿನ್‌ಗಳ ವಿತರಣೆಯು ಒಂದು ವರ್ಷದ ನಂತರ ಪ್ರಾರಂಭವಾಗುತ್ತದೆ ಮತ್ತು ಎಂಟು ವರ್ಷಗಳ ಅವಧಿಯಲ್ಲಿ ಪೂರ್ಣಗೊಳ್ಳಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ಎಂಜಿನ್‌ಗಳನ್ನು ಎಚ್‌ಎಎಲ್‌ನ ಕೊರಾಪುಟ್ ವಿಭಾಗದಲ್ಲಿ ತಯಾರಿಸಲಾಗುತ್ತಿದೆ.

<><*<><>*><>

ದೇಶದ ಹಲವು ಭಾಗಗಳಲ್ಲಿಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಗುಜರಾತ್, ಕೊಂಕಣ ಮತ್ತು ಗೋವಾ, ಮಧ್ಯಪ್ರದೇಶ, ವಿದರ್ಭ, ಸೌರಾಷ್ಟ್ರ ಮತ್ತು ಕಚ್ ಹಾಗೂ ಛತ್ತೀಸ್‌ಗಢಗಳಲ್ಲಿ ಧಾರಾಕಾರ ಮಳೆಯಾಗುವ ನಿರೀಕ್ಷೆಯಿದೆ ಇದೆ ಎಂದು ತಿಳಿಸಿದೆ.

**<><*<><>*><>**

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತದ ಅಥ್ಲೀಟ್‌ಗಳು ನಿನ್ನೆ ೫ ಪದಕಗಳನ್ನು ಗೆದ್ದು ಗಮನ ಸೆಳೆದಿದ್ದಾರೆ. ಮಹಿಳೆಯರ ೪೦೦ ಮೀಟರ್ ಟಿ-೨೦ ರೇಸ್‌ನಲ್ಲಿ ದೀಪ್ತಿ ಜೀವನಜಿ ಕಂಚಿನ ಪದಕ ಗೆದ್ದುಕೊಂಡರೆ, ಪುರುಷರ ಹೈಜಂಪ್ ಟಿ-೬೩ ವಿಭಾಗದಲ್ಲಿ ಶರತ್ ಕುಮಾರ್ ಬೆಳ್ಳಿ ಹಾಗೂ ಮರಿಯಪ್ಪನ್ ಥಂಗವೇಲು ಕಂಚಿನ ಪದಕ ಜಯಿಸಿದರು ಪುರುಷರ ಜಾವೆಲಿನ್ ಸ್ಪರ್ಧೆಯ ಎಫ್-೪೬ ವಿಭಾಗದಲ್ಲಿ ಅಜಿತ್ ಸಿಂಗ್ ಬೆಳ್ಳಿ ಹಾಗೂ ಸುಂದರ್ ಗುರ್ಜಾರ್ ಕಂಚಿನ ಪದಕ ಗೆದ್ದುಕೊಂಡರು. ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದ ಏಳನೇ ದಿನವಾದ ಇಂದು ಭಾರತ ಹಲವಾರು ಸ್ಪರ್ಧೆಗಳಲ್ಲಿ ಭಾಗವಹಿಸಲಿದೆ. ಅಥ್ಲೆಟಿಕ್ಸ್ ಪವರ್ ಲಿಫ್ಟಿಂಗ್, ಶೂಟಿಂಗ್ ಮತ್ತಿತರ ಸ್ಪರ್ಧೆಗಳಲ್ಲಿ ಭಾರತದ ಕ್ರೀಡಾಪಟುಗಳು ಪದಕ ಗೆಲ್ಲುವ ನಿರೀಕ್ಷೆಯಿದೆ. ಭಾರತ ಸ್ಪರ್ಧಿಗಳು ಈವರೆಗೆ ೩ ಚಿನ್ನ, ೮ ಬೆಳ್ಳಿ ಮತ್ತು ೯ ಕಂಚು ಸೇರಿದಂತೆ ಒಟ್ಟು ೨೦ ಪದಕಗಳನ್ನು ಗೆದ್ದುಕೊಂಡಿದ್ದಾರೆ. ಪ್ಯಾರಾಲಿಂಪಿಕ್ಸ್‌ನಲ್ಲಿ ಪದಕ ಗೆದ್ದಿರುವ ಭಾರತದ ಕ್ರೀಡಾಪಟುಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ಕ್ಕೆ <>*><>**